ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019-20 ದಿನಾಂಕ : 19-09-2019

## ಪತ್ರಿಕಾ ಆಮಂತ್ರಣ

# ಮಾಧ್ಯಮದವರ ಗಮನಕ್ಕೆ

ಹೊರ ರಾಜ್ಯ ಹಾಗೂ ರಾಷ್ಟ್ರ ಮಟ್ಟದ ಮುದ್ರಣ ಮಾಧ್ಯಮವನ್ನು ಪ್ರತಿನಿಧಿಸುವ ಮಾನ್ಯತೆ ಪಡೆದ ಓರ್ವ ವರದಿಗಾರ ಹಾಗೂ ಓರ್ವ ಛಾಯಾಗ್ರಾಹಕರಿಗೆ ಹಾಗೂ ವಿದ್ಯುನ್ಮಾನ ಮಾಧ್ಯಮವನ್ನು ಪ್ರತಿನಿಧಿಸುವ ಇಬ್ಬರು ವರದಿಗಾರರು ಹಾಗೂ ಇಬ್ಬರು ಕ್ಯಾಮರಾಮೆನ್‌ಗಳಿಗೆ ವಿಶ್ವ ವಿಖ್ಯಾತ ಮೈಸೂರು ದಸರಾದ ವರದಿಗಾಗಿ ದಸರಾ ವಿಶೇಷಾಧಿಕಾರಿಗಳೂ ಆದ ಮೈಸೂರು ಜಿಲ್ಲಾಧಿಕಾರಿಗಳು ಪಾಸ್‌ಗಳನ್ನು ನೀಡಲಿದ್ದಾರೆ.

ಆಸಕ್ತರು ಕೆಳಕಂಡ ನಮೂನೆಯಲ್ಲಿ ಸೂಕ್ತ ದಾಖಲೆಗಳೊಂದಿಗೆ ಸೆಪ್ಟೆಂಬರ್ 21 ರೊಳಗೆ ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ

## ಮೈಸೂರು ದಸರಾ ಮಹೋತ್ಸವ – 2019
## ಮಾಧ್ಯಮ ಪಾಸ್ ಕೋರಿಕೆ ನಮೂನೆ

| ಪಾಸ್‌ಪೋರ್ಟ್ ಅಳತೆ ಭಾವಚಿತ್ರ |
|---|

1. ಹೆಸರು

   **NAME**

2. ಹುದ್ದೆ:
   **DESIGNATION:**

3. ಪ್ರತಿನಿಧಿಸುವ ಮಾಧ್ಯಮ:
   **NAME OF MEDIA**

4. ದೂರವಾಣಿ ಸಂಖ್ಯೆ
   **TELEPHONE NO**

5. ಮೊಬೈಲ್ ಸಂಖ್ಯೆ
   **MOBILE NO.**

6. ವಿಳಾಸ
   **ADDRESS**

**ಕೋರಿಕೆದಾರರ ಸಹಿ** **ಸಂಸ್ಥೆ ಮುಖ್ಯಸ್ಥರ ಸಹಿ ಹಾಗೂ ಮೊಹರು**

**(ಅರ್ಜಿಯಲ್ಲಿ ಒಂದು ಭಾವಚಿತ್ರವನ್ನು ಅಂಟಿಸುವುದು ಹಾಗೂ ಅರ್ಜಿಯೊಂದಿಗೆ ಪ್ರತ್ಯೇಕವಾಗಿ ಒಂದು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನನು ಭಾವಚಿತ್ರದ ಹಿಂಭಾಗದಲ್ಲಿ ಹೆಸರು, ಪದನಾಮ ಹಾಗೂ ಮಾಧ್ಯಮದ ಹೆಸರು ನಮೂದಿಸಿ ನೀಡುವುದು, ಹೆಸರು ಹುದ್ದೆ ಹಾಗೂ ಪ್ರತಿನಿಧಿಸುವ ಮಾಧ್ಯಮವನ್ನು ಆಂಗ್ಲ ಭಾಷೆಯಲ್ಲೂ ಸಹ ಭರ್ತಿ ಮಾಡುವುದು)**

## Mysuru Dasara -2019

## <u>Application for Media Pass</u>

| |
|---|
| AFFIX<br>PASSPORT<br>SIZE<br>PHOTOGRAPH |

**1. NAME :**

**2. DESIGNATION :**

**3. NAME OF THE MEDIA**
**INSTITUTION :**

**4. ADDRESS :**

**5. TELEPHONE:**
**LANDLINE:**
**MOBILE**

**SIGNATURE OF THE APPLICANT**

**SIGNATURE OF HEAD OF MEDIA INSGTITUTION**

**PLEASE AFFIX ONE PASSPORT SIZE PHOTOGRAPH AND ENCLOSE ONE PASSPORT SIZE PHOTOGRAPH STATING NAME, DESIGNATION, NAME OF MEDIA IN A SEPARATE COVER.**

## 661 ಬೆರಳಚ್ಚುಗಾರ ಹುದ್ದೆ ತಾತ್ಕಾಲಿಕ ಆಯ್ಕೆಪಟ್ಟಿ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ) :**

**ಕರ್ನಾಟಕ ಲೋಕಸೇವಾ ಆಯೋಗ, ರಾಜ್ಯ ಸರ್ಕಾರದ 38 ಇಲಾಖೆಗಳಲ್ಲಿ ಖಾಲಿ ಇರುವ 661 ಬೆರಳಚ್ಚುಗಾರ ಹುದ್ದೆಗಳಿಗೆ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ದಿನಾಂಕ 13-02-2019 ರ ಆದೇಶದಂತೆ 1983 ರ ಕರ್ನಾಟಕ ನಾಗರೀಕ ಸೇವಾ (ಶೀಘ್ರಲಿಪಿಗಾರರು ಮತ್ತು ಬೆರಳಚ್ಚುಗಾರರ ಹುದ್ದೆಗಳ ನೇಮಕಾತಿ) ನಿಯಮಗಳ (2015 ರ ತಿದ್ದುಪಡಿ ನಿಯಮ) ಉಪ ನಿಯಮ 2(1) ರಂತೆ ಮರು ಸಿದ್ದಪಡಿಸಲಾದ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ದಿನಾಂಕ 18-09-2019 ರಂದು ಆಯೋಗದ ಅಂತರ್ಜಾಲದಲ್ಲಿ http://kpsc.kar.nic.in/ ಪಟ್ಟಿಗಳು/ತಾತ್ಕಾಲಿಕ ಆಯ್ಕೆಪಟ್ಟಿಯಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿದೆ.**

**ಈ ತಾತ್ಕಾಲಿಕ ಆಯ್ಕೆಪಟ್ಟಿಗೆ ಆಕ್ಷೇಪಣೆ ಇದ್ದಲ್ಲಿ ಸದರಿ ಅಧಿಸೂಚನೆ ಪ್ರಕಟವಾದ ದಿನಾಂಕದಿಂದ 07 ದಿನಗಳ ಒಳಗೆ ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು-1 ಇವರಿಗೆ ಸಲ್ಲಿಸಲು ಪ್ರಕಟಣೆ ತಿಳಿಸಿದೆ.**

## ಗ್ರಾಹಕ ಸಂವಾದ ಸಭೆ

**ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ) :**

**ಬೆವಿಕಂ ವ್ಯಾಪ್ತಿಗೆ ಒಳಪಡುವ ಎಲ್ಲಾ ಉಪವಿಭಾಗಗಳಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರದಂದು ಮಧ್ಯಾಹ್ನ 3:00 ರಿಂದ ಸಂಜೆ 5:30 ರವರಗೆ ಗ್ರಾಹಕ ಸಂವಾದ ಸಭೆಗಳನ್ನು ನಡೆಸಲಾಗುತ್ತಿದೆ. ಸದರಿ ಸಭೆಯಲ್ಲಿ ಗ್ರಾಹಕರು ಪಾಲ್ಗೊಂಡು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳನ್ನು ಮುಖಾಮುಖಿ ಚರ್ಚಿಸಿ ಪರಿಹರಿಸಿಕೊಳ್ಳಬಹುದಾಗಿದೆ.**

ಈ ತಿಂಗಳ ಗ್ರಾಹಕ ಸಂವಾದ ಸಭೆ ದಿನಾಂಕ 21.09.2019 ರಂದು ಬೆವಿಕಂನ ಎಲ್ಲಾ ಉಪವಿಭಾಗಗಳಲ್ಲಿ ನಡೆಯಲಿದ್ದು, ಗ್ರಾಹಕರು ಈ ಸಭೆಯ ಸದುಪಯೋಗ ಪಡೆಯಲು ಪ್ರಕಟಣೆ ತಿಳಿಸಿದೆ.

## Customer Interaction Meetings (CIM)

**Bengaluru, Septmber 19 (Karnataka Information)**

Customer Interaction Meetings (CIM) are being conducted at all Sub Divisions of BESCOM on third Saturday of every month from 3.00pm to 5.30pm. In the said Meeting (CIM), Customers are requested to attended and get your electricity related issues resolved having one to one interaction with concerned BESCOM official.

In this regard the scheduled for the CIM for the month of September on 21.09.2019. In this regard all the esteemed consumers are requested to participate and make use of the opportunity in redressal of complaints.

## ಬಾಲ ಶಕ್ತಿ ಮತ್ತು ಬಾಲ ಕಲ್ಯಾಣ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ) :**

ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ನೀಡಲಾಗುವ ಬಾಲ ಶಕ್ತಿ ಪುರಸ್ಕಾರ ಮತ್ತು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ನೀಡಲಾಗುವ ಬಾಲ ಕಲ್ಯಾಣ ಪುರಸ್ಕಾರ ಪ್ರಶಸ್ತಿಗಳನ್ನು 2019-20ನೇ ಸಾಲಿನಲ್ಲಿ ನೀಡಲು ಮಾರ್ಗಸೂಚಿಗಳನ್ವಯ ಅರ್ಹ

ಮಕ್ಕಳು/ವ್ಯಕ್ತಿ/ಸಂಸ್ಥೆಗಳಿಂದ ಮುಕ್ತ ನಾಮಪತ್ರಗಳನ್ನು ಜಾಲತಾಣದಲ್ಲಿ ದಿನಾಂಕ:31.08.2019ರವರೆಗೆ ಸಲ್ಲಿಸಲು ನಿಗಧಿಪಡಿಸಿದ್ದ **ಕಾಲಮಿತಿಯನ್ನು, ಭಾರತ ಸರ್ಕಾರದ ಪತ್ರದ ನಿರ್ದೇಶನದಂತೆ ದಿನಾಂಕ:30.09.2019ರವರೆಗೆ ವಿಸ್ತರಿಸಲಾಗಿದೆ.** ಅದರಂತೆ ಭಾರತ ಸರ್ಕಾರದ ಅಧಿಕೃತ ಜಾಲತಾಣ "www.nca-wcd.nic.in"ನಲ್ಲಿ ಅರ್ಹ ನಾಮ ನಿರ್ದೇಶಿತರು ಪ್ರಸ್ತಾವನೆಗಳನ್ನು ಭಾರತ ಸರ್ಕಾರಕ್ಕೆ ಸಲ್ಲಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವರ ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ) :**

**ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಶ್ರೀ ಜಗದೀಶ್ ಶೆಟ್ಟರ್ ಅವರು ಸೆಪ್ಟೆಂಬರ್ 20 ರಂದು ಧಾರವಾಡ ಹಾಗೂ ಬಾಗಲಕೋಟೆ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು.**

## ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ ಸೆಪ್ಟೆಂಬರ್ 22 ರಂದು ರಾಜ್ಯಾದ್ಯಂತ ವಿಜ್ಞಾನ–ಗಣಿತ ಒಲಂಪಿಯಾಡ್ ಸ್ಪರ್ಧೆ

**ಬೆಂಗಳೂರು, ಸೆಪ್ಟೆಂಬರ್ 19 ( ಕರ್ನಾಟಕ ವಾರ್ತೆ ) :**

**ರಾಜ್ಯದ ಪ್ರೌಢಶಾಲೆಗಳಲ್ಲಿನ 9ನೇ ವರ್ಗದ ವಿದ್ಯಾರ್ಥಿಗಳಲ್ಲಿ ಸ್ಪರ್ಧಾ ಮನೋಭಾವನೆ, ಚುರುಕುತನ, ಸೃಜನಶೀಲತೆ, ಜ್ಞಾಪಕ ಶಕ್ತಿ ಹಾಗೂ ಕೌಶಲ್ಯಗಳನ್ನು ಬೆಳೆಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತಿನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಉಚಿತವಾಗಿ ಜಿಲ್ಲಾ ಹಾಗೂ ರಾಜ್ಯ ಮಟ್ಟ ವಿಜ್ಞಾನ–ಗಣಿತ ಒಲಂಪಿಯಾಡ್ ಸ್ಪರ್ಧೆಯನ್ನು ಏರ್ಪಡಿಸುತ್ತಿದೆ. ಪ್ರಸ್ತುತ ಜಿಲ್ಲಾಮಟ್ಟದ ವಿಜ್ಞಾನ–ಗಣಿತ ಒಲಂಪಿಯಾಡ್ ಸ್ಪರ್ಧೆಯನ್ನು ಸೆಪ್ಟೆಂಬರ್ 22 ರಂದು ರಾಜ್ಯದ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ/ಬ್ಲಾಕ್‌ಗಳಲ್ಲಿ ಸಂಘಟಿಸಲಾಗುತ್ತಿದೆ.**

**ಸೆಪ್ಟೆಂಬರ್ 22 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.40 ರವರೆಗೆ ರಾಜ್ಯಾದ್ಯಂತ ಏಕಕಾಲಕ್ಕೆ ಜರುಗುವ ಸ್ಪರ್ಧೆಯಲ್ಲಿ ರಾಜ್ಯದ ವಿವಿಧ ಪ್ರೌಢಶಾಲೆಗಳ 11,104 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, 176 ಪರೀಕ್ಷಾ ಕೇಂದ್ರಗಳಲ್ಲಿ ಸ್ಪರ್ಧೆ ಜರುಗಲಿದೆ.**

ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಅತೀ ಹೆಚ್ಚು ಅಂಕಗಳಿಸಿ ವಿಜೇತರಾಗುವ 3 ವಿದ್ಯಾರ್ಥಿಗಳಿಗೆ ತಲಾ ರೂ. 2000/- ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಲಾಗುವುದು ಹಾಗೂ ವಿಜೇತ ವಿದ್ಯಾರ್ಥಿಗಳ ಶಾಲೆಗೆ ಆಕರ್ಷಕ ಕೊಡುಗೆ ನೀಡಲಾಗುವುದು. ಅದಲ್ಲದೇ ಜಿಲ್ಲಾ ಮಟ್ಟದಲ್ಲಿ ಅತೀ ಹೆಚ್ಚು ಅಂಕ ಗಳಿಉವ ಮೂವರು ವಿದ್ಯಾರ್ಥಿಗಳು ರಾಜ್ಯ ಮಟ್ಟಕ್ಕೆ ಆಯ್ಕೆಗೊಳ್ಳುತ್ತಾರೆ. ರಾಜ್ಯದ ಮಟ್ಟದ ಸ್ಪರ್ಧೆಯು ಅಕ್ಟೋಬರ್ 19-20 ರಂದು ವಿಜಯಪುರ ನಗರದಲ್ಲಿ ಜರುಗಲಿದ್ದು, ರಾಜ್ಯ ಮಟ್ಟದಲ್ಲಿ ವಿಜೇತರಾಗುವ 3 ವಿದ್ಯಾರ್ಥಿಗಳಿಗೆ ತಲಾ ರೂ 10,000/- ಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಗುವುದು. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಹೆಚ್ಚಿನ ಮಾಹಿತಿಗಾಗಿ ವಿಜ್ಞಾನ ಪರಿಷತ್ತಿನ ವೆಬ್‌ಸೈಟ್ www.krvp.org ಅಥವಾ ಮೊಬೈಲ್ ಸಂಖ್ಯೆ 9483549159 ಸಂಪರ್ಕಿಸಬಹುದು ಎಂದು ರಾಜ್ಯ ವಿಜ್ಞಾನ ಪರಿಷತ್ತಿನ ಗೌರವ ಕಾರ್ಯದರ್ಶಿ ಗಿರೀಶ ಕಡ್ಲೇವಾಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೀ ಉತ್ತರ ಪ್ರಕಟ

**ಬೆಂಗಳೂರು, ಸೆಪ್ಟೆಂಬರ್ 19 (ಕರ್ನಾಟಕ ವಾರ್ತೆ) :**

ಕರ್ನಾಟಕ ಲೋಕಸೇವಾ ಆಯೋಗ, ರಾಜ್ಯದ ವಿವಿಧ ನ್ಯಾಯಾಂಗ ಘಟಕಗಳಲ್ಲಿನ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳ ನೇಮಕತಿಯ ಸಂಬಂಧ ದಿನಾಂಕ 9-6-2019 ರಂದು ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಸಿದ್ದು, ಸದರಿ ಪರೀಕ್ಷೆಯ ಸಾಮಾನ್ಯ ಜ್ಞಾನ ಪತ್ರಿಕೆ – III (ವಿಷಯ ಸಂಕೇತ 366) ಮತ್ತು ಸಾಮಾನ್ಯ ಜ್ಞಾನ ಪತ್ರಿಕೆ – II (ವಿಷಯ ಸಂಕೇತ 367) ಮತ್ತು ಸಾಮಾನ್ಯ ಇಂಗ್ಲೀಷ್ ಪತ್ರಿಕೆ –II (ವಿಷಯ ಸಂಕೇತ 368) ರ ಕೀ ಉತ್ತರಗಳನ್ನು ದಿನಾಂಕ 25-6-2019 ರಂದು ಪ್ರಕಟಿಸಿ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿತ್ತು. ಸದರಿ ಆಕ್ಷೇಪಣೆಗಳನ್ನು ಪರಿಶೀಲಿಸಿ ಪರಿಷಕೃತ ಕೀ ಉತ್ತರಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಆಯೋಗದ ಅಂತರ್ಜಾಲದಲ್ಲಿ http://kpsc.kar.nic.in ಪ್ರಕಟಿಸಲಾಗಿದೆ ಎಂದು ಆಯೋಗದ ಪ್ರಕಟಣೆ ತಿಳಿಸಿದೆ.